# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1495
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 24-09-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೊಪ್ಪಳ ಜಿಲ್ಲೆ, ಕೂಕನೂರ ತಾಲ್ಲೂಕು ವ್ಯಾಪ್ತಿಯ ಮಸಬಹಂಚನಾಳ ಗ್ರಾಮ ಪಂಚಾಯಿತಿ, ಸದಸ್ಯರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಹಾಗಾದರೆ, ಸದರಿ ಪ್ರಕರಣದ ಸಂಪೂರ್ಣ ವಿವರಗಳನ್ನು ಒದಗಿಸುವುದು; | ಕೊಪ್ಪಳ ಜಿಲ್ಲೆ, ಕುಕನೂರ ತಾಲ್ಲೂಕು, ಮಸಬಹಂಚಿನಾಳ ಗ್ರಾಮ ಪಂಚಾಯತಿಗೆ ಡಿಸೆಂಬರ್ 2020 ರಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸಿ ಆಯ್ಕೆಯಾದ 11 ಜನ ಸದಸ್ಯರ ಪೈಕಿ ಗಾವರಾಳ ಚುನಾವಣಾ ಕ್ಷೇತ್ರದಿಂದ ಸ್ಪರ್ಧಿಸಿ ಆಯ್ಕೆಯಾಗಿರುವ ಶ್ರೀ ಮಹೇಶ ತಂದೆ ಈರಪ್ಪ ಸಾಕೀನ ಗಾವರಾಳ ಇವರ ವಿರುದ್ಧ ಕುಕನೂರು ಪೋಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ:48/2016 ರಲ್ಲಿ ಕಲಂ 341, 323, 324, 204, 206 ಮತ್ತು 34 ಇಂಡಿಯನ್ ಪೀನಲ್ ಕೋಡ್ (ಐ.ಪಿ.ಸಿ) ದನ್ವಯ ಪ್ರಕರಣ ದಾಖಲಾಗಿರುತ್ತದೆ. |
| (ಇ) | ಈ ಸಂಬಂಧ ಸದರಿಯವರ ಮೇಲೆ ಕಾನೂನಿನ ಪ್ರಕಾರ ತೆಗೆದುಕೊಂಡ ಕ್ರಮಗಳೇನು; (ವಿವರಗಳನ್ನು ನೀಡುವುದು) | ಪ್ರಕರಣವು ಜಿಲ್ಲಾ ಸತ್ರ ನ್ಯಾಯಾಲಯ, ಕೊಪ್ಪಳದಲ್ಲಿ ವಿಚಾರಣೆಗೆ ಬಾಕಿಯಿರುತ್ತದೆ. |
| (ಈ) | ಯಾವ ಕಾಲಮಿತಿಯಲ್ಲಿ ಸದರಿಯವರ ಮೇಲೆ ನಿಯಮಾನುಸಾರ ಕಾನೂನು ರೀತ್ಯಾ ಕ್ರಮ ತೆಗೆದುಕೊಂಡು ಸದಸ್ಯತ್ವವನ್ನು ರದ್ದುಗೊಳಿಸಲಾಗುವುದು? | ಪ್ರಕರಣವು ನ್ಯಾಯಾಲಯದಲ್ಲಿರುವುದರಿಂದ ಕಾಲಮಿತಿ ನಿಗದಿಗೊಳಿಸಲು ಸಾಧ್ಯವಿಲ್ಲ. ಜಿಲ್ಲಾ ಸತ್ರ ನ್ಯಾಯಾಲಯ, ಕೊಪ್ಪಳ ನೀಡುವ ಆದೇಶದಂತೆ, ಈ ಪ್ರಕರಣದಲ್ಲಿ ಮುಂದಿನ ಕ್ರಮ ವಹಿಸಲಾಗುವುದು. |

ಸಂ. ಗ್ರಾಅಪ 370 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು